ಆ) ಹಾಗಿದ್ದರೆ, ಈ ಹಳೆಯ ಶಾಲಾ ಕಟ್ಟಡಗಳ ದುರಸ್ತಿ ಕಾರ್ಯವನ್ನು ಯಾವ ಯಾವ ಇಲಾಖೆಯವರು ಮಾಡಬೇಕು;

ಇ) ನಗರ ಹಾಗೂ ಗ್ರಾಮಾಂತರ ಶಾಲೆಗಳ ದುರಸ್ತಿಗಾಗಿ 2003–04ನೇ ಸಾಲಿನಲ್ಲಿ ಖರ್ಚಾಗಿರುವ ಹಣ ಎಷ್ಟು?

ಶ್ರೀ ಆರ್. ರಾಮಲಿಂಗರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಬಂದಿದೆ.

ಆ) ಜಿಲ್ಲಾಪಂಚಾಯತ್ ಇಂಜಿನಿಯರಿಂಗ್ ವಿಭಾಗ/ ಭೂಸೇನಾ ನಿಗಮ/ ಶಾಲಾ ಅಭಿವೃದ್ಧಿ ಹಾಗೂ ಉಸ್ತುವಾರಿ ಸಮಿತಿ/ ಅಥವಾ ನಿರ್ಮಿತಿ ಕೇಂದ್ರಗಳು.

ಇ) 2003–04ನೇ ಸಾಲಿನಲ್ಲಿ ರಾಜ್ಯವಲಯದ ಯೋಜನೇತರದಡಿಯಲ್ಲಿ ರೂ.741.70 ಲಕ್ಷಗಳನ್ನು ಹಾಗೂ ಪ್ರಧಾನಮಂತ್ರಿ ಗ್ರಾಮಾಂತರ ಯೋಜನೆಯಡಿ ರೂ.141.80 ಲಕ್ಷಗಳನ್ನು ಗ್ರಾಮಾಂತರ ಹಾಗೂ ನಗರ ಶಾಲೆಗಳ ದುರಸ್ತಿಗಾಗಿ ಖರ್ಚುಮಾಡಲಾಗಿದೆ.

2479(3141) ಶ್ರೀ ಈಶ್ವರಪ್ಪ ಕೆ.ಎಸ್. (ಶಿವಮೊಗ್ಗ):–ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ನಗರಕ್ಕೆ ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜಿನ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಶಿವಮೊಗ್ಗದಲ್ಲಿದ್ದ ಸರ್ಕಾರಿ ಸಹ್ಯಾದ್ರಿ ಕಾಲೇಜು ಈಗ ಕುವೆಂಪು ವಿಶ್ವವಿದ್ಯಾಲಯಕ್ಕೆ ಸೇರುವುದರಿಂದ ಬಡ ವಿದ್ಯಾರ್ಥಿಗಳಿಗೆ ತುಂಬ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದರೆ, ಶಿವಮೊಗ್ಗದಲ್ಲಿ ಬರುವ ಶೈಕ್ಷಣಿಕ ವರ್ಷದಿಂದ ಸರ್ಕಾರಿ ಕಾಲೇಜು ಆರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು):

ಅ) ಹೌದು.

ಆ) ಬಂದಿಲ್ಲ.

ಇ) ಶಿವಮೊಗ್ಗದಲ್ಲಿ ಸರ್ಕಾರಿ ಪದವಿ ಕಾಲೇಜನ್ನು ಪ್ರಾರಂಭಿಸುವ ಕುರಿತಂತೆ, ಹಣದ ಲಭ್ಯತೆ, ಮೂಲಭೂತ ಸೌಕರ್ಯ ಹಾಗೂ ಅವಶ್ಯಕತೆಯ ಆಧಾರದ ಮೇಲೆ ಪರಿಶೀಲಿಸಲಾಗುವುದು.

2480(3142) ಶ್ರೀ ಈಶ್ವರಪ್ಪ ಕೆ.ಎಸ್. (ಶಿವಮೊಗ್ಗ):–ಮಾನ್ಯ ವಸತಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಕೊಳಚೆ ಪ್ರದೇಶಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು);